ಉಪಾಧ್ಯಕ್ಷಿಣಿಯವರು : ಕಾಗದ ಪತ್ರಗಳನ್ನು ಮಂಡಿಸಲಾಯಿತು.

ಪ್ರಕಟಣೆ

ಉಪಾಧ್ಯಕ್ಷರು : ಈಗ ಒಂದು ಪ್ರಕಟಣೆ. ವಿಧಾನ ಪರಿಷತ್ತಿನ ಸಭಾಪತಿಯವರಿಂದ ಈ ಕೆಳಕಂಡ ಸಂದೇಶವು ಬಂದಿದೆ.

"1990ನೇ ಇಸವಿಯ ಹಿಂದೂ ಉತ್ತರಾಧಿಕಾರ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಜಂಟಿ ಪರಿಶೀಲನಾ ಸಮಿತಿಗೆ ಒಪ್ಪಿಸಲಾಗಿರುವ ಪ್ರಸ್ತಾವಕ್ಕೆ" ಅನುಮೋದನೆಯನ್ನು ವಿಧಾನ ಪರಿಷತ್ತು ನೀಡಲಾಗಿದೆ ಹಾಗೂ ಈ ಕೆಳಕಂಡ ವಿಧಾನ ಪರಿಷತ್ತಿನ ಸದಸ್ಯರನ್ನು ಜಂಟಿ ಪರಿಶೀಲನಾ ಸಮಿತಿಯ ಸದಸ್ಯರಾಗಿ ನಾಮ ನಿರ್ದೇಶನ ಮಾಡಲಾಗಿದೆ ಎಂದು ತಿಳಿಸುತ್ತೇನೆ.

ಶ್ರೀಯುತರುಗಳಾದ

1. ಶ್ರೀಮತಿ ಬಿಂಬಾ ರಾಯ್ಕರ್
2. ಎನ್. ತಿಪ್ಪಣ್ಣ
3. ಕೆ.ಬಿ. ಮಲ್ಲಿಕಾರ್ಜುನ
4. ಡಿ.ಹೆಚ್. ಶಂಕರಮೂರ್ತಿ

ಅರ್ಜಿಗಳನ್ನೊಪ್ಪಿಸುವುದು

ಶ್ರೀಮತಿ ಮೋಟಮ್ಮ : ಸನ್ಮಾನ್ಯ ಉಪಾಧ್ಯಕ್ಷಿಣಿಯವರೆ, ಚಿಕ್ಕಮಗಳೂರು ಜಿಲ್ಲೆ, ಮೂಡಿಗೆರೆ ತಾಲ್ಲೂಕಿನ ದರದಹಳ್ಳಿ ಹತ್ತಿರ ಹೇಮಾವತಿ ನದಿಗೆ ಅಡ್ಡವಾಗಿ ಕಾಲು ಸೇತುವೆ ಕಟ್ಟುವ ಬಗ್ಗೆ ಅರ್ಜಿಯನ್ನು ಸಭೆಯ ಮುಂದೆ ಒಪ್ಪಿಸುತ್ತಿದ್ದೇನೆ.

ಉಪಾಧ್ಯಕ್ಷರು : ಅರ್ಜಿಗಳನ್ನೊಪ್ಪಿಸಲಾಯಿತು.

ಶ್ರೀ ಶ್ರೀರಂಗದೇವರಾಯುಲು : (ಸದಸ್ಯರು ಗೈರುಹಾಜರು)

ಚುನಾವಣಾ ಪ್ರಸ್ತಾವಗಳು

ಶ್ರೀ ಎಂ. ವೀರಪ್ಪಮೊಯಿಲಿ : (ಶಿಕ್ಷಣ ಹಾಗೂ ಸಂಸದೀಯ ವ್ಯವಹಾರಗಳ ಮಂತ್ರಿ) ಸನ್ಮಾನ್ಯ ಉಪಾಧ್ಯಕ್ಷಿಣಿಯವರೇ,

1976ನೇ ಇಸವಿಯ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಶಾಸನದ 47ನೇ ಕಲಮಿನ ಮೇರೆಗೆ ಅವಶ್ಯಪಡಿಸಿರುವಂತೆ ಏಕಲ ಸಂಕ್ರಮಣೀಯ ಮತದ ಮೂಲಕ ಅನುಪಾತ ಪ್ರಾತಿನಿಧ್ಯದ ನೀತಿಗೆ ಅನುಸಾರವಾಗಿ ಈ ಸಭೆಯು ಮೈಸೂರು ವಿಶ್ವವಿದ್ಯಾನಿಲಯದ ತೆರವಾದ ಸೆನೆಟ್ ಸ್ಥಾನಕ್ಕೆ ಒಬ್ಬ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

1976ನೇ ಇಸವಿಯ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಶಾಸನದ 47ನೇ ಕಲಮಿನ ಮೇರೆಗೆ ಅವಶ್ಯಪಡಿಸಿರುವಂತೆ ಏಕಲ ಸಂಕ್ರಮಣೀಯ ಮತದ ಮೂಲಕ ಅನುಪಾತ ಪ್ರಾತಿನಿಧ್ಯದ ನೀತಿಗೆ ಅನುಸಾರವಾಗಿ ಈ ಸಭೆಯು ಮಂಗಳೂರು ವಿಶ್ವವಿದ್ಯಾನಿಲಯದ ತೆರವಾದ ಸೆನೆಟ್ ಸ್ಥಾನಕ್ಕೆ ಒಬ್ಬ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಉಪಸಭಾಧ್ಯಕ್ಷಿಣಿಯವರು : ಪ್ರಸ್ತಾವ ಏನೆಂದರೆ,

1976ನೇ ಇಸವಿಯ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಶಾಸನದ 47ನೇ ಕಲಮಿನ ಮೇರೆಗೆ ಅವಶ್ಯಪಡಿಸಿರುವಂತೆ ಏಕಲ ಸಂಕ್ರಮಣೀಯ ಮತದ ಮೂಲಕ ಅನುಪಾತ ಪ್ರಾತಿನಿಧ್ಯದ ನೀತಿಗೆ ಅನುಸಾರವಾಗಿ ಈ ಸಭೆಯು ಮೈಸೂರು ವಿಶ್ವವಿದ್ಯಾನಿಲಯದ ತೆರವಾದ ಸೆನೆಟ್ ಸ್ಥಾನಕ್ಕೆ ಒಬ್ಬ ಸದಸ್ಯರನ್ನು ಚುನಾಯಿಸಬೇಕು.